# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1261 |
| ಸದಸ್ಯರ ಹೆಸರು | ಶ್ರೀ ಕೆ. ಪ್ರತಾಪಸಿಂಹ ನಾಯಕ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 22-08-2025 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಕಳಪೆ ರಸಗೊಬ್ಬರ, ನಕಲಿ ಬಿತ್ತನೆ ಬೀಜ ಹಾಗೂ ಕೀಟನಾಶಕಗಳ ವ್ಯಾಪಕ ಮಾರಾಟದಿಂದಾಗಿ ರೈತರು ಸಂಕಷ್ಟಕ್ಕೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿ ಕಳಪೆ ರಸಗೊಬ್ಬರ, ನಕಲಿ ಬಿತ್ತನೆ ಬೀಜ ಹಾಗೂ ಕೀಟನಾಶಕ ಕಾಯ್ದೆಯಡಿ ನೋಂದಣಿಯಾದ ಪೀಡೆನಾಶಕಗಳನ್ನು ಜೈವಿಕ ಹೆಸರಿನ ಉತ್ಪನ್ನಗಳಲ್ಲಿ ಮಿಶ್ರಣ ಮಾಡಿ ನಕಲಿ ಜೈವಿಕ ಹೆಸರಿನಡಿ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| (ಆ) | ಬಂದಿದ್ದಲ್ಲಿ, ಕಳಪೆ ರಸಗೊಬ್ಬರ, ನಕಲಿ ಬಿತ್ತನೆ ಬೀಜ ಹಾಗೂ ಕೀಟನಾಶಕಗಳ ಮಾರಾಟಕ್ಕೆ ಕಡಿವಾಣ ಹಾಕಲು ಸರ್ಕಾರ ಇದುವರೆಗೆ ಏನು ಕ್ರಮಕೈಗೊಂಡಿದೆ; (ವಿವರ ನೀಡುವುದು) | ಕೇಂದ್ರ ಸರ್ಕಾರ ರೂಪಿಸಿರುವ ರಸಗೊಬ್ಬರ (ನಿಯಂತ್ರಣ) ಆದೇಶ, 1985, ಬೀಜ ಕಾಯ್ದೆಗಳು (ಬೀಜ ಕಾಯ್ದೆ, 1966, ಬೀಜ ಅಧಿನಿಯಮ, 1968 ಮತ್ತು ಬೀಜ ನಿಯಂತ್ರಣ ಆದೇಶ 1983) ಮತ್ತು ಕೀಟನಾಶಕ ಕಾಯ್ದೆ 1968 ಮತ್ತು ಕೀಟನಾಶಕ ನಿಯಮ, 1971 ಜಾರಿಯಲ್ಲಿದ್ದು, ಸದರಿ ಆದೇಶ, ನಿಯಮ ಮತ್ತು ಕಾಯಿದೆಗಳನ್ವಯ ರಸಗೊಬ್ಬರ/ಬೀಜ/ಕೀಟನಾಶಕ ಪರಿವೀಕ್ಷಕರುಗಳನ್ನು ಅಧಿಸೂಚಿಸಲಾಗಿರುತ್ತದೆ ಹಾಗೂ ಅಪರ ಕೃಷಿ ನಿರ್ದೇಶಕರು(ಜಾಗೃತ ಕೋಶ) ರವರ ನೇತೃತ್ವದಲ್ಲಿ ಜಾಗೃತ ಕೋಶ ಸೃಜಿಸಲಾಗಿದೆ ಮತ್ತು ಇವರ ಅಧೀನದಲ್ಲಿ ರಾಜ್ಯದ 4 ಕಂದಾಯ ವಿಭಾಗಗಳಲ್ಲಿ (ಬೆಂಗಳೂರು, ಮೈಸೂರು, ಕಲಬುರಗಿ ಮತ್ತು ಬೆಳಗಾವಿ) ಜಂಟಿ ಕೃಷಿ ನಿರ್ದೇಶಕರು (ಜಾಗೃತ ಕೋಶ) ಕಾರ್ಯನಿರ್ವಹಿಸುತ್ತಿದ್ದಾರೆ. ಜಾಗೃತ ಕೋಶದ ಅಧಿಕಾರಿಗಳು, ಜಂಟಿ ಕೃಷಿ ನಿರ್ದೇಶಕರ ಕಛೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಹಾಯಕ ಕೃಷಿ ನಿರ್ದೇಶಕರು(ಜಾರಿದಳ) ಮತ್ತು ಅಧಿಸೂಚಿಸಿರುವ ರಸಗೊಬ್ಬರ/ಬೀಜ/ಕೀಟನಾಶಕ ಪರಿವೀಕ್ಷಕರು ದೂರುಗಳನ್ನು ಆಧರಿಸಿ/ಅನಿರೀಕ್ಷಿತವಾಗಿ/ಆಗಿಂದ್ದಾಗ್ಗೆ ಅವರ ವ್ಯಾಪ್ತಿಯಲ್ಲಿ ಬರುವ ವಿವಿಧ ಕೃಷಿ ಪರಿಕರ ಮಾರಾಟ ಮಳಿಗೆ/ಉತ್ಪಾದನಾ ಘಟಕ/ಗೋದಾಮುಗಳಿಗೆ ಭೇಟಿ ನೀಡಿ ಪರಿಶೀಲನೆಯನ್ನು ಕೈಗೊಂಡು ಹಾಗೂ ವಿವಿಧ ಪರಿಕರಗಳ ಮಾದರಿಗಳನ್ನು ಸಂಗ್ರಹಿಸಿ ವಿಶ್ಲೇಷಣೆಗೆ ಒಳಪಡಿಸಿ ಕಳಪೆ ಅಥವಾ ನಕಲಿ ಎಂದು |

| | | |
|---|---|---|
| | | ಕಂಡುಬಂದಲ್ಲಿ ಸಂಬಂಧಪಟ್ಟವರ ವಿರುದ್ಧ ಸೂಕ್ತ ಆದೇಶ, ನಿಯಮ ಮತ್ತು ಕಾಯಿದೆಗಳನ್ವಯ ಕ್ರಮ ಕೈಗೊಳ್ಳುತ್ತಿದ್ದಾರೆ.<br>• ಪ್ರಸಕ್ತ ಸಾಲಿನಲ್ಲಿ ರಸಗೊಬ್ಬರಕ್ಕೆ ಸಂಬಂಧಿಸಿದಂತೆ (ಜುಲೈ ಮಾಹೆಯ ಅಂತ್ಯಕ್ಕೆ) ನಕಲಿ ರಸಗೊಬ್ಬರ ಮಾರಾಟ ಮಾಡುತ್ತಿರುವವರ ವಿರುದ್ಧ 03 FIR(92/2025, 125/2025 &114/2025 ) ದಾಖಲಿಸಲಾಗಿರುತ್ತದೆ. ಜುಲೈ ಮಾಹೆಯ ಅಂತ್ಯಕ್ಕೆ 76 ವಿವಿಧ ಗ್ರೇಡ್ ನ ರಸಗೊಬ್ಬರ ಮಾದರಿಗಳು ಕಳಪೆ ಎಂದು ವರದಿಯಾಗಿದ್ದು, ಸದರಿ ಮಾದರಿಗಳನ್ನು ಎರಡನೇ ವಿಶ್ಲೇಷಣೆ ಹಾಗೂ ಮರುವಿಶ್ಲೇಷಣೆಗೆ ಒಳಪಡಿಸಿದ್ದು, ವರದಿಯನ್ನಾಧರಿಸಿ ಇಲ್ಲಿಯವರೆಗೂ 02 ಮೊಕದ್ದಮೆಗಳನ್ನು ಸಂಬಂಧಪಟ್ಟ ನ್ಯಾಯಾಲಯದಲ್ಲಿ ಹೂಡಲಾಗಿರುತ್ತದೆ. ಬಿತ್ತನೆ ಬೀಜಕ್ಕೆ ಸಂಬಂಧಿಸಿದಂತೆ (ಜುಲೈ ಮಾಹೆಯ ಅಂತ್ಯಕ್ಕೆ) 69 ಮಾದರಿಗಳು ಕಳಪೆ ಎಂದು ವರದಿಯಾಗಿದ್ದು, ಸಂಬಂಧಪಟ್ಟ ಬೀಜ ವಿತರಕರು /ಮಾರಾಟಗಾರರ ವಿರುದ್ಧ ಬೀಜ ಕಾಯ್ದೆ 1966 ರನ್ವಯ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸುವ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.<br>• ಪೀಡೆನಾಶಕ ಸಂಬಂಧಿಸಿದಂತೆ ಪ್ರಸಕ್ತ ಸಾಲಿನಲ್ಲಿ 52 ಮಾದರಿಗಳು ಕಳಪೆ ಎಂದು ವರದಿಯಾಗಿದ್ದು, ಸದರಿ ಮಾದರಿಗಳು ಮರುವಿಶ್ಲೇಷಣೆಯಲ್ಲೂ ಕಳಪೆ ಎಂದು ವರದಿಯಾದಲ್ಲಿ ಕೀಟನಾಶಕ ಕಾಯ್ದೆ ಮತ್ತು ನಿಯಮಗಳನ್ವಯ ಕ್ರಮ ವಹಿಸಲಾಗುವುದು. ಅಲ್ಲದೆ ಜೈವಿಕ ಹೆಸರಿನ ಉತ್ಪನ್ನಗಳಲ್ಲಿ ರಾಸಾಯನಿಕ ಪೀಡೆನಾಶಕಗಳನ್ನು ಮಿಶ್ರಣ ಮಾಡಿರುವ 01 ಪ್ರಕರಣ ಕಂಡು ಬಂದಿದ್ದು ಕೀಟನಾಶಕ ಕಾಯ್ದೆ ಮತ್ತು ನಿಯಮಗಳ ಉಲ್ಲಂಘನೆ ವಿರುದ್ಧ ನ್ಯಾಯಾಲಯದಲ್ಲಿ ಮೊಕದ್ದಮೆಯನ್ನು ದಾಖಲಿಸಲಾಗಿರುತ್ತದೆ. |

| | | |
|---|---|---|
| (ಇ) | ಸಬ್ಸಿಡಿ ದರದಲ್ಲಿ ರೈತರಿಗೆ ನೀಡುವ ಬೇವು ಲೇಪಿತ ಯೂರಿಯಾವನ್ನು ಕೂಡ ಕಾಳಸಂತೆಯಲ್ಲಿ ಮಾರಾಟ ಮಾಡುವ ಹಾಗೂ ದುರ್ಬಳಕೆ ಮಾಡಿಕೊಳ್ಳುತ್ತಿರುವ ಪ್ರಕರಣಗಳು ವ್ಯಾಪಕವಾಗಿ ನಡೆಯುತ್ತಿದ್ದು, ಸದರಿ ಅಕ್ರಮಗಳಿಗೆ ಕಾರಣವಾಗಿರುವವರ ವಿರುದ್ಧ ಸರ್ಕಾರ ಏನು ಕ್ರಮಕೈಗೊಂಡಿದೆ? (ವಿವರ ನೀಡುವುದು) | ಸಹಾಯಧನದ ಯೂರಿಯಾ ರಸಗೊಬ್ಬರವನ್ನು ಕೃಷಿಯೇತರ ಚಟುವಟಿಕೆಗಳಿಗೆ ಬಳಕೆಯಾಗದಂತೆ ತಡೆಯಲು ಮತ್ತು ರಸಗೊಬ್ಬರ (ನಿಯಂತ್ರಣ) ಆದೇಶ, 1985ರ ಉಲ್ಲಂಘನೆ ಸಂಬಂಧ ಕ್ರಮ ಕೈಗೊಳ್ಳಲು ರಾಜ್ಯದಲ್ಲಿ ರಸಗೊಬ್ಬರ ಪರಿವೀಕ್ಷಕರನ್ನು ಅಧಿಸೂಚಿಸಲಾಗಿರುತ್ತದೆ. ಅಧಿಸೂಚಿಸಿರುವ ರಸಗೊಬ್ಬರ ಪರಿವೀಕ್ಷಕರು ದೂರುಗಳನ್ನು ಆಧರಿಸಿ/ಅನಿರೀಕ್ಷಿತವಾಗಿ/ಆಗಿಂದ್ದಾಗ್ಗೆ ಅವರ ವ್ಯಾಪ್ತಿಯಲ್ಲಿನ ಯೂರಿಯಾ ಬಳಸುತ್ತಿರುವ ಕೈಗಾರಿಕೆಗಳಿಗೆ ನಿಯಮಿತವಾಗಿ ಭೇಟಿ ನೀಡಿ, ಪರಿಶೀಲನೆಯನ್ನು ಕೈಗೊಂಡು ತಾಂತ್ರಿಕ ದರ್ಜೆಯ(Technical Grade) ಯೂರಿಯಾ ರಸಗೊಬ್ಬರದ ಚೀಲಗಳಿಂದ ಮಾದರಿಗಳನ್ನು ಸಂಗ್ರಹಿಸಿ ವಿಶ್ಲೇಷಣೆಗೆ ಒಳಪಡಿಸಲಾಗುತಿದ್ದು, ಸದರಿ ಮಾದರಿಯ ವಿಶ್ಲೇಷಣಾ ವರದಿಯಲ್ಲಿ ಬೇವಿನ ಅಂಶ ವರದಿಯಾದಲ್ಲಿ, ರಸಗೊಬ್ಬರ (ನಿಯಂತ್ರಣ) ಆದೇಶ, 1985 ಮತ್ತು ಅಗತ್ಯ ವಸ್ತುಗಳ ಕಾಯ್ದೆ, 1955ರಡಿ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಇತರೆ ರಾಜ್ಯದ ಗಡಿ ಹೊಂದಿರುವ ಜಿಲ್ಲೆಗಳ ಚೆಕ್ ಪೋಸ್ಟ್ ಗಳಲ್ಲಿ ಅನಧಿಕೃತವಾಗಿ/ಅಕ್ರಮವಾಗಿ ಯೂರಿಯಾ ಹಾಗೂ ಇನ್ನಿತರೆ ರಸಗೊಬ್ಬರಗಳ ಸಾಗಾಣಿಕೆಯ ಬಗ್ಗೆ ಕೃಷಿ ಇಲಾಖೆ ಮತ್ತು ಹತ್ತಿರದ ಪೊಲೀಸ್ ಠಾಣೆಗೆ ಮಾಹಿತಿ ನೀಡಲು ಸಂಬಂಧಪಟ್ಟ ಇಲಾಖೆಗಳಿಗೆ ಜಿಲ್ಲಾಧಿಕಾರಿಗಳ ಮೂಲಕ ನಿರ್ದೇಶನ ನೀಡಿ ಕಟ್ಟುನಿಟ್ಟಿನ ಕ್ರಮವಹಿಸಲಾಗುತ್ತಿದೆ.<br><br>ಕೃಷಿಗೆ ಬಳಸುತ್ತಿರುವ ಸಹಾಯಧನದ ಯೂರಿಯಾ ರಸಗೊಬ್ಬರವನ್ನು ಕೃಷಿಯೇತರ ಚಟುವಟಿಕೆಗಳಿಗೆ ಬಳಕೆಯಾಗುವುದನ್ನು ತಡೆಯಲು ಜಿಲ್ಲಾ ಮಟ್ಟದಲ್ಲಿ ಕೃಷಿ ಇಲಾಖೆ, ಪೊಲೀಸ್ ಇಲಾಖೆ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಕಂದಾಯ ಇಲಾಖೆ ಹಾಗೂ ಇತರೆ ಇಲಾಖೆಯ ಅಧಿಕಾರಿಗಳನ್ನೊಳಗೊಂಡ ತಂಡಗಳನ್ನು ರಚಿಸಿ ಜಿಲ್ಲಾಧಿಕಾರಿಗಳಿಂದ ಆದೇಶ ಹೊರಡಿಸಲಾಗಿದೆ. ಸದರಿ ತಂಡಗಳು ಯೂರಿಯಾ ಬಳಸುತ್ತಿರುವ ಕೈಗಾರಿಕೆಗಳನ್ನು ಪರಿಶೀಲಿಸುತ್ತಿದ್ದು, ಕೃಷಿಗೆ ಬಳಸುವ ಸಹಾಯಧನದ ಯೂರಿಯಾ ಬಳಸುತ್ತಿದ್ದಲ್ಲಿ ತಪ್ಪಿತಸ್ಥರ ವಿರುದ್ಧ ಕ್ರಮ ವಹಿಸಲಾಗುತ್ತಿದೆ. |

ಪ್ರಸಕ್ತ ಸಾಲಿನಲ್ಲಿ ಯೂರಿಯಾ ರಸಗೊಬ್ಬರವನ್ನು ಅಕ್ರಮ ದಾಸ್ತಾನು ಮಾಡಿ ಕೃತಕ ಅಭಾವ ಸೃಷ್ಟಿಸಿ ಕಾಳಸಂತೆಯಲ್ಲಿ ಮಾರಾಟ ಹಾಗೂ ಕೃಷಿಯೇತರ ಚಟುವಟಿಕೆಗಳಿಗೆ ಬಳಸುತ್ತಿರುವ 06 ಪ್ರಕರಣಗಳು ಕಂಡುಬಂದಿದ್ದು ಸಂಬಂಧಪಟ್ಟ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಎಫ್.ಐ.ಆರ್ ದಾಖಲಿಸಿ ನಿಯಮಾನುಸಾರ ಮುಂದಿನ ಕ್ರಮವಹಿಸಲಾಗುತ್ತಿದೆ. ವಿವರಗಳು ಈ ಕೆಳಕಂಡಂತಿದೆ.

| ಕ್ರ.ಸಂ | ಜಿಲ್ಲೆ | ಎಫ್.ಐ.ಆರ್ ಸಂಖ್ಯೆ |
|---|---|---|
| 1 | ಹಾಸನ | FIR 44/2025 |
| 2 | ತುಮಕೂರು | FIR 0162/2025 |
| 3 | ತುಮಕೂರು | FIR 0129/2025 |
| 4 | ಮೈಸೂರು | FIR 0169/2025 |
| 5 | ಹಾಸನ | FIR 126/2025 |
| 6 | ಚಿಕ್ಕಮಗಳೂರು | FIR 0073/2025 |

ಸಂಖ್ಯೆ: AGRI/274/ACT/2025

(ಎನ್. ಚಲುವರಾಯಸ್ವಾಮಿ)
ಕೃಷಿ ಸಚಿವರು